**Bangalore**
**Regional News**
**06.03.2026 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಆಯ-ವ್ಯಯದಲ್ಲಿ ವಿತ್ತೀಯ ಶಿಸ್ತು ಪಾಲಿಸಲಾಗಿದೆ ; ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ

೨. ೮೦೦ ಶಾಲೆಗಳು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಣ; ಖಾಲಿಯಿರುವ ೧೫ ಸಾವಿರ ಬೋಧಕ ಹುದ್ದೆಗಳ ಭರ್ತಿಗೆ ನಿರ್ಧಾರ

೩. ಅಬಕಾರಿ ಇಲಾಖೆಗೆ ೪೫ ಸಾವಿರ ಕೋಟಿ ತೆರಿಗೆ ಸಂಗ್ರಹದ ಗುರಿ - ರಾಜ್ಯದಲ್ಲಿ ರೋಹಿತ್ ವೆಮುಲಾ ಕಾಯ್ದೆ ಜಾರಿಗೆ ತರಲು ತೀರ್ಮಾನ

೪. ಮುಂಗಡ ಪತ್ರದಲ್ಲಿ ಆರ್ಥಿಕ ಸದೃಢತೆ ಕಾಪಾಡಲು ವಿಫಲ - ಕೇಂದ್ರ ಸಚಿವ ಕುಮಾರಸ್ವಾಮಿ; ಜನಸಾಮಾನ್ಯರ ಮೇಲೆ ತೆರಿಗೆಯ ಹೊರೆ - ಬಿಜೆಪಿ ಆರೋಪ

೫. ರಾಜ್ಯ ಬಜೆಟ್‌ಗೆ ಮಿಶ್ರ ಪ್ರತಿಕ್ರಿಯೆ ; ಚಾಮರಾಜನಗರದ ಹನೂರಿನಲ್ಲಿ ರೈತರಿಂದ ಸಂಭ್ರಮಾಚರಣೆ

೬. ಯುಪಿಎಸ್‌ಸಿ ಫಲಿತಾಂಶ ಪ್ರಕಟ ; ೫೩ನೇ ರ್‍ಯಾಂಕ್ ಪಡೆದ ಕಿರಣ್ ಕಮತೆ ರಾಜ್ಯಕ್ಕೆ ಪ್ರಥಮ

**<><*<><>*><>**

ರಾಜ್ಯದ ಜನತೆಗೆ ಕೊಟ್ಟ ಭರವಸೆ ಈಡೇರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಪ್ರಸಕ್ತ ಸಾಲಿನ ಆಯ-ವ್ಯಯ ಮಂಡನೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೬ ವರ್ಷದ ಮಕ್ಕಳು ಮೊಬೈಲ್ ಬಳಸಬಹುದು. ಆದರೆ ಸಾಮಾಜಿಕ ಜಾಲತಾಣ ಬಳಸಬಾರದು ಎಂದು ತಿಳಿಸಿದ್ದಾರೆ. ಆಯವ್ಯಯದಲ್ಲಿ ವಿತ್ತೀಯ ಶಿಸ್ತು ಪಾಲಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಈ ಬಾರಿ ಶಿಕ್ಷಣಕ್ಕೆ ೧೭ ಸಾವಿರ ಕೋಟಿ ಅನುದಾನ ಕಡಿಮೆಯಾಗಿದೆ ಎಂದು ಅವರು ಹೇಳಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಬಾಕಿಯಿರುವ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

**<><*<><>*><>**

ಹದಿನಾರು ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಮಾಧ್ಯಮ ಬಳಕೆಯನ್ನು ನಿಷೇಧಿಸಲಾಗುವುದು ಎಂದು ಆಯ-ವ್ಯಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಹೆಚ್ಚುತ್ತಿರುವ ಮೊಬೈಲ್ ಬಳಕೆಯಿಂದ ಮಕ್ಕಳ ಮೇಲೆ ಬೀರುವ ಅಡ್ಡ ಪರಿಣಾಮಗಳನ್ನು ತಡೆಗಟ್ಟುವ ಉದ್ದೇಶದಿಂದ ಈ ನಿರ್ಧಾರ ಕೈಗೊಂಡಿರುವುದಾಗಿ ತಿಳಿಸಿದ್ದಾರೆ.

**<><*<><>*><>**

ಮಹಿಳಾ ಅತಿಥಿ ಉಪನ್ಯಾಸಕರಿಗೆ ೯೦ ದಿನಗಳ ಮಾತೃತ್ವ ರಜೆ ಘೋಷಿಸಿದ್ದಾರೆ. ಇದು ಸರ್ಕಾರಿ ಪ್ರಥಮ ದರ್ಜೆ, ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಉಪನ್ಯಾಸಕರಿಗೆ ಅನ್ವಯವಾಗಲಿದೆ. ಮುಂದಿನ ಶೈಕ್ಷಣಿಕ ವರ್ಷದಿಂದ ಇದು ಜಾರಿಗೆ ಬರಲಿದೆ. ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿನಿಯರಿಗೆ ಆರ್ಥಿಕ ನೆರವು ನೀಡುವ ಉದ್ದೇಶದಿಂದ ವಿವಿಧ ವಿದ್ಯಾರ್ಥಿ ವೇತನ ಯೋಜನೆಗಳನ್ನು ಮುಂದುವರಿಸಲಾಗುವುದು ಎಂದು ತಿಳಿಸಿದ್ದಾರೆ. ಅಜೀಂ ಪ್ರೇಮ್‌ಜಿ ಫೌಂಡೇಷನ್ ವತಿಯಿಂದ ೨೦೨೫-೨೬ನೇ ಸಾಲಿನಲ್ಲಿ ಉನ್ನತ ಶಿಕ್ಷಣಕ್ಕಾಗಿ ೩೭ ಸಾವಿರ ವಿದ್ಯಾರ್ಥಿನಿಯರಿಗೆ ವಾರ್ಷಿಕ ೩೦ ಸಾವಿರ ರೂಪಾಯಿ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ಈ

ಯೋಜನೆಯ ವ್ಯಾಪ್ತಿಗೆ ಬಾರದ ಉಳಿದ ವಿದ್ಯಾರ್ಥಿನಿಯರಿಗೆ ರಾಜ್ಯ ಸರ್ಕಾರದ ವತಿಯಿಂದ 'ದೀಪಿಕಾ ವಿದ್ಯಾರ್ಥಿ ವೇತನ ಯೋಜನೆ' ಅಡಿಯಲ್ಲಿ ಆರ್ಥಿಕ ಸಹಾಯ ಒದಗಿಸಲಾಗುವುದು ಎಂದು ಬಜೆಟ್ ಭಾಷಣದಲ್ಲಿ ಮುಖ್ಯಮಂತ್ರಿ ಪ್ರಸ್ತಾಪಿಸಿದ್ದಾರೆ. ರಾಜ್ಯದಲ್ಲಿ ಹವ್ಯಕ ಭಾಷಾ ಬೆಳವಣಿಗಾಗಿ ಹವ್ಯಕ ಭಾಷಾ ಅಕಾಡೆಮಿ ಸ್ಥಾಪನೆ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಶಾಲಾ-ಕಾಲೇಜುಗಳಲ್ಲಿ ಖಾಲಿಯಿರುವ ೧೫ ಸಾವಿರದ ಬೋಧಕ ಹುದ್ದೆಗಳ ಭರ್ತಿ ೮೦೦ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಲು ಮುಂದಿನ ೩ ವರ್ಷಗಳಲ್ಲಿ ೩ ಸಾವಿರದ ೯೦೦ ಕೋಟಿ ರೂಪಾಯಿ ಮೀಸಲಿಡಲಾಗಿದೆ. ಶಾಲೆಗಳ ದುರಸ್ಥಿ ಮತ್ತು ನಿರ್ಮಾಣಕ್ಕೆ ೫೬೫ ಕೋಟಿ ರೂಪಾಯಿ ಎಐ ತಂತ್ರಜ್ಞಾನ ಬಳಸಿ ವಿದ್ಯಾರ್ಥಿಗಳಿಗೆ ಡಿಜಿಟಲ್, ಟ್ಯೂಟರ್ ಸೌಲಭ್ಯ ಒದಗಿಸಲು ನಿರ್ಧರಿಸಲಾಗಿದೆ. ೭೫ ಲಕ್ಷ ವಿದ್ಯಾರ್ಥಿಗಳಿಗೆ ೨ ಸಾವಿರದ ೬೭೬ ಕೋಟಿ ವಿದ್ಯಾರ್ಥಿ ವೇತನ, ೫ ಸಾವಿರ ಅಲ್ಪ ಸಂಖ್ಯಾತರ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಗೆ ೫೦ ಸಾವಿರ ನೆರವು, ೧೧ ಬೃಹತ್ ಉದ್ಯೋಗ ಮೇಳಗಳ ಆಯೋಜನೆ, ಆನೆಕಲ್‌ನಲ್ಲಿ ೮೦ ಸಾವಿರ ಆಸನಗಳ ಸಾಮರ್ಥ್ಯದ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲಾಗುವುದು ಎಂದು ಆಯ-ವ್ಯಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ್ದಾರೆ. ರಾಜ್ಯದಲ್ಲಿ ಹೊಸದಾಗಿ ನಿರ್ಮಿಸಲಾಗುತ್ತಿರುವ ರೈಲ್ವೆ ಮಾರ್ಗಗಳಿಗೆ ೬೦೦ ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ. ಉಪನಗರ ರೈಲು ಯೋಜನೆಗೆ ೫೦೦ ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

<><*<><>*><>

ರಾಜ್ಯಾದ್ಯಂತ ಏಕರೂಪದ ಅಬಕಾರಿ ಸುಂಕ ಹೆಚ್ಚಿಸಲು ನಿರ್ಧರಿಸಲಾಗಿದೆ. ಇನ್ನು ಮುಂದೆ ಮದ್ಯದಲ್ಲಿರುವ ಆಲ್ಕೋಹಾಲ್ ಅಥವಾ ಮದ್ಯದ ಅಂಶ ಆಧರಿಸಿ ತೆರಿಗೆ ವಿಧಿಸಲು ತೀರ್ಮಾನಿಸಲಾಗಿದೆ. ಇದೇ ವೇಳೆ ಅಬಕಾರಿ ಇಲಾಖೆಗೆ ೪೫ ಸಾವಿರ ಕೋಟಿ ತೆರಿಗೆ ಸಂಗ್ರಹದ ಗುರಿ ನೀಡಲಾಗಿದೆ. ಈ ಮೂಲಕ ಆಯ-ವ್ಯಯದಲ್ಲಿ ಮದ್ಯದ ದರ ಹೆಚ್ಚಳದ ಸುಳಿವು ನೀಡಿದ್ದಾರೆ.

<><*<><>*><>

ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಮತ್ತು ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಜಾತಿ ಆಧಾರಿತ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ಸಾಮಾಜಿಕ ಕಿರುಕುಳ ತಡೆಗಟ್ಟಲು ರೋಹಿತ್ ವೆಮುಲಾ ಕಾಯ್ದೆ ಜಾರಿಗೆ ತರಲು ಸರ್ಕಾರ ನಿರ್ಧರಿಸಿದೆ. ಜೊತೆಗೆ ವಿದ್ಯಾರ್ಥಿಗಳಲ್ಲಿ ನಾಯಕತ್ವ ಜವಾಬ್ದಾರಿ ಮತ್ತು ಪ್ರಜಾಪ್ರಭುತ್ವ ಮೌಲ್ಯಗಳನ್ನು ಬೆಳೆಸಲು ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆ ನಡೆಸಲು ಸರ್ಕಾರ ಉದ್ದೇಶಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಭಾಷಣದಲ್ಲಿ ಘೋಷಿಸಿದ್ದಾರೆ. ಉನ್ನತ ಶಿಕ್ಷಣ ಸಂಸ್ಥೆಗಳನ್ನು ವಿಸ್ತರಿಸುವ ಪ್ರಯತ್ನಗಳ ಭಾಗವಾಗಿ ಬಸವ ಕಲ್ಯಾಣದಲ್ಲಿ ಖಾಸಗಿ ವಚನ ವಿಶ್ವವಿದ್ಯಾಲಯ ಸ್ಥಾಪಿಸಲು ಸರ್ಕಾರ ೨೫ ಎಕರೆ ಭೂಮಿ ಒದಗಿಸಲಿದೆ. ಐಐಟಿ ಮಾದರಿಯಲ್ಲಿ ಯೂನಿವರ್ಸಿಟಿ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜನ್ನು ಅಭಿವೃದ್ಧಿಪಡಿಸಲು ೫೦೦ ಕೋಟಿ ರೂಪಾಯಿ ನೀಡಲು ಉದ್ದೇಶಿಸಲಾಗಿದ್ದು, ೧೦೦ ಕೋಟಿ ರೂಪಾಯಿಗಳನ್ನು ಪ್ರಸಕ್ತ ವರ್ಷದಲ್ಲಿ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಈ ಬಾರಿಯ ಆಯ-ವ್ಯಯದಲ್ಲಿ ಮುಜರಾಯಿ ಇಲಾಖಾ ವ್ಯಾಪ್ತಿಯ ಎರಡು ದೇವಾಲಯಗಳಿಗೆ ಪ್ರಾಧಿಕಾರ ರಚಿಸುವ ಐತಿಹಾಸಿಕ ತೀರ್ಮಾನವನ್ನು ರಾಜ್ಯ ಸರ್ಕಾರ ತೆಗೆದುಕೊಂಡಿದೆ. ದಕ್ಷಿಣಕನ್ನಡ ಜಿಲ್ಲೆಯ ಕುಕ್ಕೆ ಸುಬ್ರಮಣ್ಯ, ಉಡುಪಿ ಜಿಲ್ಲೆಯ ಕೊಲ್ಲೂರು ಮೂಕಾಂಬಿಕಾ ದೇವಾಲಯಗಳಿಗೆ ಅಭಿವೃದ್ಧಿ ಪ್ರಾಧಿಕಾರ ರಚಿಸುವ ನಿರ್ಧಾರವನ್ನು ಪ್ರಕಟಿಸಲಾಗಿದೆ. ಈ ದೇವಾಲಯಗಳಿಗೆ ಮೂಲಭೂತ ಸೌಲಭ್ಯ ಮತ್ತು ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಪ್ರಾಧಿಕಾರ ರಚಿಸುವುದಾಗಿ

ತಿಳಿಸಿದ್ದಾರೆ. ಮಂತ್ರಾಲಯದ ರಾಘವೇಂದ್ರ ಸ್ವಾಮಿ ಮಠದಲ್ಲಿ ಪ್ರಸ್ತುತ ಇರುವ ಛತ್ರ ಶಿಥಿಲಗೊಂಡಿದ್ದು, ಇದರ ನವೀಕರಣಕ್ಕೆ ನಿರ್ಧರಿಸಲಾಗಿದೆ. ಶ್ರೀಶೈಲಂ ಕ್ಷೇತ್ರದಲ್ಲಿ ಹೊಸದಾಗಿ ಯಾತ್ರಿನಿವಾಸ, ತುಳಜಾಪುರದಲ್ಲಿ ಹೊಸ ಛತ್ರ ನಿರ್ಮಾಣ ಮಾಡಲು ನಿರ್ಧರಿಸಲಾಗಿದೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ ೨೦೨೬-೨೭ನೇ ಸಾಲಿನ ರಾಜ್ಯ ಮುಂಗಡ ಪತ್ರದಲ್ಲಿ ಆರ್ಥಿಕ ಸದೃಢತೆಯನ್ನು ಕಾಪಾಡಲು ವಿಫಲರಾಗಿದ್ದಾರೆ ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಇದು ಮುಖ್ಯಮಂತ್ರಿ ಅವರಿಗೆ ೧೭ನೇ ಬಜೆಟ್ ಆಗಿದ್ದು, ರಾಜ್ಯದ ಜನರಿಗೆ ತೆರಿಗೆ ಸಂಕಷ್ಟ ಎದುರಾಗಿದೆ. ರಾಜ್ಯದ ಆರ್ಥಿಕತೆ ಹಿಂಜರಿಕೆಯತ್ತ ಸಾಗುತ್ತಿದ್ದು, ಸಿಎಜಿ ವರದಿ, ಭಾರತೀಯ ರಿಸರ್ವ್ ಬ್ಯಾಂಕ್ ನೀಡಿರುವ ಎಚ್ಚರಿಕೆಯನ್ನು ಪರಿಗಣಿಸಲಾಗಿಲ್ಲ ಎಂದು ದೂರಿದ್ದಾರೆ.
ಈ ಬಾರಿಯ ಮುಂಗಡಪತ್ರದಲ್ಲಿ ಕೇಂದ್ರದ ವಿರುದ್ಧ ಆರೋಪ ಮುಂದುವರೆಸಲಾಗಿದ್ದು, ಅದು ಆಕ್ಷೇಪಾರ್ಹ ಎಂದು ಹೇಳಿದ್ದಾರೆ. ರಾಜ್ಯದ ಒಟ್ಟಾರೆ ಬಜೆಟ್ ಗಾತ್ರ ೪.೪೮ ಲಕ್ಷ ಕೋಟಿ ರೂಪಾಯಿ ಮೊತ್ತವಾಗಿದ್ದು,, ರಾಜ್ಯದ ಈಗಿನ ಒಟ್ಟು ಸಾಲ ೮.೨೪ ಲಕ್ಷ ಕೋಟಿ ರೂಪಾಯಿಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

<><*<><>*><>

'ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು' ಎಂದು ಹೇಳುವ ರಾಜ್ಯ ಸರ್ಕಾರ ಸರ್ವರಿಗೂ ತೆರಿಗೆ, ಸರ್ವರಿಗೂ ಸಾಲ ಎಂಬ ಸ್ಥಿತಿ ನಿರ್ಮಾಣ ಮಾಡಿದೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಮುಂಗಡ ಪತ್ರ ಜನ ಸಾಮಾನ್ಯರ ಮೇಲೆ ತೆರಿಗೆಯ ಹೊರೆ ಹೊರಿಸಿದೆ ಎಂದು ದೂರಿದ್ದಾರೆ. ಆಯ-ವ್ಯಯದಲ್ಲಿ ಪ್ರಮುಖ ವಲಯಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗಿಲ್ಲ, ಬಜೆಟ್‌ನಲ್ಲಿ ರೈತರಿಗೆ ಆರ್ಥಿಕ ಬೆಂಬಲ ನೀಡುವ ಯಾವುದೇ ವಿಚಾರ ಮಂಡನೆಯಾಗಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಆರೋಗ್ಯ, ನೀರಾವರಿ, ಉತ್ತರಕರ್ನಾಟಕ ರಾಜ್ಯಗಳ ಅಭಿವೃದ್ಧಿ ಸೇರಿದಂತೆ ಹಲವು ವಿಚಾರಗಳನ್ನು ಬಜೆಟ್‌ನಲ್ಲಿ ಸಂಪೂರ್ಣವಾಗಿ ಕಡೆಗಣಿಸಲಾಗಿದೆ. ಕರಾವಳಿ ಭಾಗವನ್ನು ನಿರ್ಲಕ್ಷಿಸಲಾಗಿದ್ದು, ಈ ಬಜೆಟ್ ಕರ್ನಾಟಕದ ಸಮಗ್ರ ಅಭಿವೃದ್ಧಿಯ ದೃಷ್ಟಿಕೋನ ಹೊಂದಿಲ್ಲ ಎಂದು ತಿಳಿಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಪ್ರಸಕ್ತ ಸಾಲಿನ ರಾಜ್ಯ ಬಜೆಟ್‌ಅನ್ನು ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ ಅಧ್ಯಕ್ಷೆ ಉಮಾರೆಡ್ಡಿ ಸ್ವಾಗತಿಸಿದ್ದಾರೆ. ಬಜೆಟ್‌ನಲ್ಲಿ ಘೋಷಿಸಲಾದ ಉಪಕ್ರಮಗಳು ಕೈಗಾರಿಕೋದ್ಯಮಿಗಳ ವಿಶ್ವಾಸವನ್ನು ಹೆಚ್ಚಿಸಿದೆ. ಎಂಎಸ್‌ಎಂಇ ವಲಯಕ್ಕೆ ಬೆಂಬಲ ನೀಡಿರುವುದು ಉದಯೋನ್ಮುಖ ತಂತ್ರಜ್ಞಾನಗಳಿಗೆ ಉತ್ತೇಜನ ಮತ್ತು ರಾಜ್ಯಾದ್ಯಂತ ಹೂಡಿಕೆಯನ್ನು ಪ್ರೋತ್ಸಾಹಿಸಲು ಪೂರಕವಾಗಿದೆ ಎಂದು ತಿಳಿಸಿದ್ದಾರೆ. ಬಿಯಾಂಡ್ ಬೆಂಗಳೂರು, ೨ನೇ ಮತ್ತು ೩ನೇ ಹಂತದ ನಗರಗಳಲ್ಲಿ ಕೈಗಾರಿಕೆಗಳ ಸ್ಥಾಪನೆ ಮತ್ತು ತಾಂತ್ರಿಕ ಅಭಿವೃದ್ಧಿಯನ್ನು ಉತ್ತೇಜಿಸುವ ಸರ್ಕಾರದ ಕ್ರಮ ಶ್ಲಾಘನೀಯ ಎಂದು ಹೇಳಿದ್ದಾರೆ. ಮೈಸೂರನ್ನು ೨ನೇ ಐಟಿ ನಗರವನ್ನಾಗಿ ಅಭಿವೃದ್ಧಿಪಡಿಸುವುದು, ಚಿಕ್ಕಬಳ್ಳಾಪುರದಲ್ಲಿ ಡ್ರೋನ್ ಪರೀಕ್ಷಾ ಸೌಲಭ್ಯ, ಕ್ವಾಂಟಮ್ ತಂತ್ರಜ್ಞಾನದಲ್ಲಿ ಮುಂದುವರೆಯಲು ನೀಲನಕ್ಷೆಯು ನಾವೀನ್ಯತೆ ಆಧಾರಿತ ಕೈಗಾರಿಕೆಗಳಲ್ಲಿ ಕರ್ನಾಟಕವನ್ನು ಮುಂಚೂಣಿಗೆ ತೆಗೆದುಕೊಂಡು ಹೋಗಲು ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಕುಡಿಯುವ ನೀರು ಮತ್ತು ೧೨ ಸಾವಿರ ಎಕರೆ ಪ್ರದೇಶಕ್ಕೆ ನೀರಾವರಿ ಕಲ್ಪಿಸುವ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಉಡುತೊರೆ ಹಳ್ಳ ಜಲಾಶಯ ನೀರಾವರಿ ಯೋಜನೆಯನ್ನು ೪೯೦ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಯವ್ಯಯದಲ್ಲಿ ಘೋಷಣೆ ಮಾಡಿದ್ದಾರೆ. ಕೆರೆಕಟ್ಟೆಗಳು, ಜನ-ಜಾನುವಾರುಗಳಿಗೆ ಸಮರ್ಪಕ ನೀರಿನ ವ್ಯವಸ್ಥೆ ಕಲ್ಪಿಸುವ ಈ ಯೋಜನೆ ಘೋಷಣೆಯಾಗುತ್ತಿದ್ದಂತೆ ಹನೂರು ತಾಲೂಕಿನ ಅಜ್ಜೀಪುರದಲ್ಲಿ ರೈತರು ಸಂಭ್ರಮಾಚರಣೆ ನಡೆಸಿದರು. ಬಹು ಬೇಡಿಕೆಯ ನೀರಾವರಿ ಯೋಜನೆಗೆ ಬಜೆಟ್ ನಲ್ಲಿ ಅಸ್ತು ಎಂದಿದ್ದಕ್ಕೆ ಸಂತಸಗೊಂಡ ರೈತರು ಪಟಾಕಿ ಸಿಡಿಸಿ-ಸಿಹಿ ಹಂಚಿ ಸಂಭ್ರಮಿಸಿದರು.

<><*<><>*><>

ರಾಜ್ಯ ಸರ್ಕಾರ ಮಂಡಿಸಿರುವ ಬಜೆಟ್ ರೈತರ ಪಾಲಿಗೆ ತೀವ್ರ ನಿರಾಸೆ ತಂದಿದೆ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಕರ್ನಾಟಕ ಎರಡನೇ ಸ್ಥಾನದಲ್ಲಿದ್ದರೂ, ಇದನ್ನು ತಡೆಗಟ್ಟಲು ಬಜೆಟ್‌ನಲ್ಲಿ ಯಾವುದೇ ಪರಿಣಾಮಕಾರಿ ಯೋಜನೆಗಳನ್ನು ಘೋಷಿಸಿಲ್ಲ ಎಂದು ಟೀಕಿಸಿದ್ದಾರೆ. ಕೃಷಿ ಕ್ಷೇತ್ರದಲ್ಲಿ ಎಐ ತಂತ್ರಜ್ಞಾನದ ಬಳಕೆ ಮತ್ತು ಅಭಿವೃದ್ಧಿಗೆ ಒತ್ತು ನೀಡಿರುವುದು ಉತ್ತಮ ಚಿಂತನೆಯಾಗಿದೆ ಎಂದು ಹೇಳಿದ್ದಾರೆ.

ಧ್ವನಿ : ಕುರುಬೂರು ಶಾಂತಕುಮಾರ್

<><*<><>*><>

ಇದು ಜನಪರ ಕಾಳಜಿವುಳ್ಳ ಅತ್ಯುತ್ತಮ ಬಜೆಟ್ ಎಂದು ವಿಜಯನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ನಿಂಬಗಲ್ ರಾಮಕೃಷ್ಣ ಅಭಿಪ್ರಾಯಪಟ್ಟಿದ್ದಾರೆ. ಜಿಲ್ಲೆಯ ತುಂಗಭದ್ರಾ ಅಚ್ಚುಕಟ್ಟಿನ ಎಲ್ಲಾ ೩೩ ಗೇಟ್ ಹೊಸದಾಗಿ ಅಳವಡಿಕೆ ಕಾರ್ಯ ಶ್ಲಾಘನೀಯ ಎಂದು ತಿಳಿಸಿದ್ದಾರೆ.

ಧ್ವನಿ: ನಿಂಬಗಲ್ ರಾಮಕೃಷ್ಣ

<><*<><>*><>

ಕೇಂದ್ರ ಲೋಕಸೇವಾ ಆಯೋಗವು ೨೦೨೫ನೇ ಸಾಲಿನ ನಾಗರಿಕ ಸೇವೆಗಳ ಪರೀಕ್ಷೆಯ ಅಂತಿಮ ಫಲಿತಾಂಶ ಪ್ರಕಟಿಸಿದೆ. ಅನುಜ್ ಅಗ್ನಿಹೋತ್ರಿ ಪ್ರಥಮ ಸ್ಥಾನ ಪಡೆದರೆ, ರಾಜೇಶ್ವರಿ ಸುವೆ ಎಂ ಮತ್ತು ಆಕಾಶ್ ಧುಲ್ ಕ್ರಮವಾಗಿ ಎರಡನೇ ಮತ್ತು ಮೂರನೇ ರ್‍ಯಾಂಕ್ ಗಳಿಸಿದ್ದಾರೆ. ರಾಜ್ಯದ ಕಿರಣ್ ಕಮತೆ ರಾಜ್ಯಕ್ಕೆ ಮೊದಲ ಮತ್ತು ದೇಶಕ್ಕೆ ೫೩ನೇ ರ್‍ಯಾಂಕ್ ಪಡೆದಿದ್ದಾರೆ. ರಾಜ್ಯದ ೨೨ ಮಂದಿ ಯುಪಿಎಸ್‌ಇ ಪರೀಕ್ಷೆಯಲ್ಲಿ ಅರ್ಹತೆ ಪಡೆದಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಶೀಘ್ರವೇ ಗುತ್ತಿಗೆದಾರರ ಸಭೆ ಏರ್ಪಾಡು ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘ ಬಾಕಿಬಿಲ್ ಬಿಡುಗಡೆಗೆ ಆಗ್ರಹಿಸಿ ನಡೆಸುತ್ತಿರುವ ಪ್ರತಿಭಟನಾ ನಿರತರನ್ನು ಭೇಟಿ ಮಾಡಿ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು, ಬಿಜೆಪಿ ಸರ್ಕಾರದ ಬಿಲ್‌ಗೆ ಗುತ್ತಿಗೆದಾರರು ಈಗ ಹೋರಾಟ ನಡೆಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ತಮ್ಮ ಇಲಾಖೆಯಲ್ಲಿ ೧೩ ಸಾವಿರ ಕೋಟಿ ಸಣ್ಣ ನಿರಾವರಿ ಇಲಾಖೆಯಲ್ಲಿ ೩ ಸಾವಿರ ಕೋಟಿ ಸೇರಿದಂತೆ ಸುಮಾರು ೩೭ ಸಾವಿರ ಕೋಟಿ ಬಿಲ್ ಬಾಕಿ ಇದೆ. ಈ ಸಮಸ್ಯೆ ಶೀಘ್ರವೇ ಬಗೆಹರಿಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜೊತೆ ಸಚಿವರಾದ ಸತೀಶ್ ಜಾರಕಿಹೊಳಿ, ಬೋಸರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

<><*<><>*><>

ಕರ್ನಾಟಕ, ತಮಿಳುನಾಡು, ಕೇರಳದಲ್ಲಿ ನಾಳೆ ಮತ್ತು ನಾಡಿದ್ದು, ರಣಹದ್ದು ಗಣತಿ ನಡೆಯಲಿದೆ. ರಣಹದ್ದುಗಳಿಗೆ ಪ್ರಮುಖ ಭದ್ರಕೋಟೆಯಾಗಿ ಹೊರಹೊಮ್ಮಿರುವ ನೀಲಗಿರಿ ಮೀಸಲು ಪ್ರದೇಶದೊಳಗಿನ ಅರಣ್ಯ ಶ್ರೇಣಿಗಳ ಮೇಲೆ ಸಮೀಕ್ಷೆ ನಡೆಯಲಿದೆ. ರಾಜ್ಯದ ಬಂಡೀಪುರ ಹುಲಿ ಮೀಸಲು ಪ್ರದೇಶ ನಾಗರಹೊಳೆ ಹುಲಿ ಮೀಸಲು ಪ್ರದೇಶ, ಬಿಳಿಗಿರಿ ರಂಗನಾಥ ದೇವಾಲಯ ಪ್ರದೇಶಗಳಲ್ಲಿ ಸಮೀಕ್ಷೆ ನಡೆಯಲಿದೆ. ಭಾರತವು ೯ ಜಾತಿಯ ರಣಹದ್ದುಗಳಿಗೆ ನೆಲೆಯಾಗಿದ್ದು, ಅವುಗಳಲ್ಲಿ ೭ ತಮಿಳುನಾಡಿನಲ್ಲಿ ದಾಖಲಾಗಿವೆ. ತಮಿಳುನಾಡಿನಲ್ಲಿ ಅತಿಹೆಚ್ಚು ೧೫೭, ಕೇರಳದಲ್ಲಿ ೧೨೫, ಕರ್ನಾಟಕದಲ್ಲಿ ೧೦೬ ರಣಹದ್ದುಗಳಿವೆ.

<><*<><>*><>

ರಾಜ್ಯದಲ್ಲಿನ ಸರ್ಕಾರಿ ನೌಕರರನ್ನು ಒಳಗೊಂಡಂತೆ ವಿವಿಧ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳೆಯರಿಗೆ ಋತುಚಕ್ರದ ಸಮಯದಲ್ಲಿ ಒಂದು ದಿನದ ವೇತನ ಸಹಿತ ರಜೆಯನ್ನು ಪಡೆಯಲು ಅವಕಾಶ ಮಾಡಿಕೊಡಲಾಗಿದೆ. ಕರ್ನಾಟಕ ರಾಜ್ಯ ಕಾರ್ಮಿಕರ ಕಲ್ಯಾಣ ಮಂಡಳಿಗೆ ವಿವಿಧ ಕಲ್ಯಾಣ ಕಾರ್ಯಕ್ರಮಗಳಡಿ ಒಟ್ಟು ೪೩ ಸಾವಿರದ ೯೩೬ ಅರ್ಹ ಫಲಾನುಭವಿಗಳಿಗೆ ಒಟ್ಟು ೩೯ ಕೋಟಿ ರೂಪಾಯಿಗಳ ಧನ ಸಹಾಯ ನೀಡಲಾಗಿದೆ. ಆಶಾದೀಪಾ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಒಟ್ಟು ೫ ಸಾವಿರದ ೬೨ ಅಭ್ಯರ್ಥಿಗಳ ಪರವಾಗಿ ೧೮ ಕೋಟಿ ರೂಪಾಯಿಗಳನ್ನು ಅರ್ಹ ಉದ್ಯೋಗದಾತರಿಗೆ ಮರು ಪಾವತಿಸಲಾಗಿದೆ.

<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>